ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1684(1913)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಲೇಔಟುಗಳ ಮಾಹಿತಿ ಕುರಿತು

(ಅ) ಕಳೆದ ಮೂರು ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಎಷ್ಟು ಲೇಔಟ್‌ಗಳಿಗೆ ಅನುಮತಿ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಿಗಧಿತ ಅವಧಿಯಲ್ಲಿ ಲೇಔಟ್ ಅಭಿವೃದ್ಧಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಭಿವೃದ್ಧಿ ಮಾಡಿರುವ/ ಮಾಡದಿರುವ ಲೇಔಟ್‌ಗಳ ಸಂಖ್ಯೆ ಎಷ್ಟು; ಮತ್ತು ಅಭಿವೃದ್ಧಿ ಮಾಡದಿರುವ ಲೇಔಟ್‌ಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಾರವಾರ ಜಿಲ್ಲೆಯಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಲೇಔಟ್ ಸಂಖ್ಯೆ ಎಷ್ಟು; ಮತ್ತು ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು? (ತಾಲ್ಲೂಕುವಾರು ವಿವರ ನೀಡುವುದು)